# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮ ಪಂಚಾಯಿತಿ ದೂರದೃಷ್ಟಿ ಯೋಜನೆ ತಯಾರಿಕೆಗೆ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯ ಗದಗ ವಿದ್ಯಾರ್ಥಿಗಳ ಸೇವೆಯನ್ನು ಗದಗ ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಬಳಸಿಕೊಳ್ಳುವ ಕುರಿತು.

ಓದಲಾಗಿದೆ:1. ಸರ್ಕಾರ ಆದೇಶ ಸಂಖ್ಯೆ:ಗ್ರಾಅಪ/270/ಗ್ರಾಪಂಅ/2021,ದಿನಾಂಕ: 27.07.2021.

2. ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ "ಸುಸ್ಥಿರ ಅಭಿವೃದ್ಧಿ ಗುರಿಗಳ ಸ್ಥಳೀಕರಣ ವರದಿ"ಯ ಅನ್ವಯ.

3. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ:ಕಪಂರಾಲ/ಅಭಿವೃದ್ಧಿ/ 406/2022,ಬೆಂಗಳೂರು, ದಿನಾಂಕ:26.08.2022.

4. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ:ಕಪಂರಾಲ/ಅಭಿವೃದ್ಧಿ/ 406/2022,ಬೆಂಗಳೂರು, ದಿನಾಂಕ:17.09.202.

***

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(3) ಮತ್ತು (4)ರಲ್ಲಿ ಗ್ರಾಮ ಪಂಚಾಯಿತಿ ದೂರದೃಷ್ಟಿ ಯೋಜನೆ ಸಿದ್ಧಪಡಿಸುವಿಕೆ ಕುರಿತಂತೆ, ಮಾರ್ಗಸೂಚಿ ಹಾಗೂ ಗ್ರಾಮ ಮಟ್ಟದ ಮತ್ತು ಗ್ರಾಮ ಪಂಚಾಯಿತಿ ಮಟ್ಟದ ಯೋಜನಾ ಸಮಿತಿಗಳ ರಚನೆ ಮತ್ತು ಪಾತ್ರಗಳ ಕುರಿತಂತೆ ವಿವರಿಸಲಾಗಿರುತ್ತದೆ.

ಗದಗ ಜಿಲ್ಲೆಯಲ್ಲಿ ಸಮಗ್ರ ಜಿಲ್ಲಾ ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದ್ದು ಇದರ ಮುಂದುವರೆದ ಹಂತವಾಗಿ ಗ್ರಾಮ ಪಂಚಾಯಿತಿ ಹಂತದ ದೂರದೃಷ್ಟಿ ಯೋಜನೆಯನ್ನು ಸಿದ್ಧಪಡಿಸಲು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಈಗಾಗಲೇ ಗ್ರಾಮ ಪಂಚಾಯಿತಿಗಳು ಗುರುತಿಸಿರುವ ಅನುವುಗಾರರೊಂದಿಗೆ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳ ಸೇವೆಯನ್ನು ಬಳಸಿಕೊಳ್ಳಲು ಉದ್ದೇಶಿಸಿದೆ. ಈ ವಿದ್ಯಾರ್ಥಿಗಳು ಗ್ರಾಮ ಯೋಜನಾ ಸಮಿತಿಯ ಮುಂದಾಳತ್ವದಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳ ದ್ವಿತೀಯ ದತ್ತಾಂಶ ಸಂಗ್ರಹಣೆ, ಕೇಂದ್ರೀಕೃತ ಗುಂಪು ಚರ್ಚೆ ಮತ್ತು ಸಹಭಾಗೀ ಗ್ರಾಮೀಣ ಸಮೀಕ್ಷೆಗಳನ್ನು ಕೈಗೊಳ್ಳಲು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು/ ಕಾರ್ಯದರ್ಶಿಗಳು/ ಗ್ರಾಮ ಪಂಚಾಯಿತಿ ಸಿಬ್ಬಂದಿಗಳ ಸಹಯೋಗದೊಂದಿಗೆ ಆಯೋಜಿಸುವುದು ಮತ್ತು ನಿರ್ವಹಿಸುವುದು. ಇದಕ್ಕಾಗಿ ವಿದ್ಯಾರ್ಥಿಗಳು ಒಂದು ತಿಂಗಳ ಅವಧಿಯಲ್ಲಿ ಸಮೀಕ್ಷೆಗಳನ್ನು ಕೈಗೊಂಡು ಅಂತಿಮ ವರದಿಯನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಿಗೆ ಸಲ್ಲಿಸಬೇಕಾಗಿರುತ್ತದೆ. ಈ ಅವಧಿಗೆ ಪ್ರತಿ ವಿದ್ಯಾರ್ಥಿಗೆ ರೂ.5000/- ಗಳ ಗೌರವಧನವನ್ನು ನಿಗದಿಪಡಿಸುವುದು ಹಾಗೂ ವಿದ್ಯಾರ್ಥಿಗಳು ಗ್ರಾಮ ಪಂಚಾಯಿತಿ ಹಂತದಲ್ಲಿ ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ತಗಲುವ ಇತರ ವೆಚ್ಚಗಳನ್ನು ಹದಿನೈದನೇ ಹಣಕಾಸು ಆಯೋಗದ **"Any other location specific felt needs" Expenditure Component** ಯಡಿ ವೆಚ್ಚ ಭರಿಸಲು ಅಥವಾ ಸ್ವಂತಸಂಪನ್ಮೂಲದಿಂದ ಭರಿಸಬಹುದಾಗಿದೆ.

ಈ ಮೇಲ್ಕಂಡ ಪ್ರಸ್ತಾವನೆಯ ಅನ್ವಯ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಕಪಂರಾಲ/ಅಭಿವೃದ್ಧಿ/406/2022,ಬೆಂಗಳೂರು, ದಿನಾಂಕ: 27.10.2022.**

ಗದಗ ಜಿಲ್ಲೆಯಲ್ಲಿ ಸಮಗ್ರ ಜಿಲ್ಲಾ ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದ್ದು ಇದರ ಮುಂದುವರೆದ ಹಂತವಾಗಿ ಗ್ರಾಮ ಪಂಚಾಯಿತಿ ಹಂತದ ದೂರದೃಷ್ಟಿ ಯೋಜನೆಯನ್ನು ಸಿದ್ಧಪಡಿಸಲು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಈಗಾಗಲೇ ಗ್ರಾಮ ಪಂಚಾಯಿತಿಗಳು ಗುರುತಿಸಿರುವ ಅನುವುಗಾರರೊಂದಿಗೆ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳ ಸೇವೆಯನ್ನು ಬಳಸಿಕೊಳ್ಳಲು ಆದೇಶಿಸಿದೆ.

ಈ ವಿದ್ಯಾರ್ಥಿಗಳು ಗ್ರಾಮ ಯೋಜನಾ ಸಮಿತಿಯ ಮುಂದಾಳತ್ವದಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳ ದ್ವಿತೀಯ ದತ್ತಾಂಶ ಸಂಗ್ರಹಣೆ, ಕೇಂದ್ರೀಕೃತ ಗುಂಪು ಚರ್ಚೆ ಮತ್ತು ಸಹಭಾಗೀ ಗ್ರಾಮೀಣ ಸಮೀಕ್ಷೆಗಳನ್ನು ಕೈಗೊಳ್ಳಲು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು/ ಕಾರ್ಯದರ್ಶಿಗಳು/ ಗ್ರಾಮ ಪಂಚಾಯಿತಿ ಸಿಬ್ಬಂದಿಗಳ ಸಹಯೋಗದೊಂದಿಗೆ ಕಾರ್ಯ ನಿರ್ವಹಿಸಲು ಆದೇಶಿಸಿದೆ. ವಿಶ್ವವಿದ್ಯಾನಿಲಯವು ನಿಯೋಜಿಸುವ ವಿದ್ಯಾರ್ಥಿಗಳನ್ನು ಜಿಲ್ಲಾ ಪಂಚಾಯಿತಿಯು ಗ್ರಾಮ ಪಂಚಾಯಿತಿವಾರು ನಿಯೋಜಿಸಲು ಅಗತ್ಯ ಕ್ರಮ ಕೈಗೊಳ್ಳಲು ಈ ಮೂಲಕ ಆದೇಶಿಸಿದೆ.

ಗ್ರಾಮ ಪಂಚಾಯಿತಿ ದೂರದೃಷ್ಟಿ ಯೋಜನೆ ಸಿದ್ಧಪಡಿಸುವ ವಿದ್ಯಾರ್ಥಿಗಳು ಒಂದು ತಿಂಗಳ ಅವಧಿಯಲ್ಲಿ ಸಮೀಕ್ಷೆಗಳನ್ನು ಕೈಗೊಂಡು ಅಂತಿಮ ವರದಿಯನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಿಗೆ ಸಲ್ಲಿಸುವುದನ್ನು ಕಡ್ಡಾಯಗೊಳಿಸಲಾಗಿದೆ. ಈ ಅವಧಿಗೆ ಪ್ರತಿ ವಿದ್ಯಾರ್ಥಿಗೆ ರೂ.5000/-ಗಳ ಗೌರವಧನವನ್ನು ನಿಗದಿಪಡಿಸಲು ಹಾಗೂ ವಿದ್ಯಾರ್ಥಿಗಳು ಗ್ರಾಮ ಪಂಚಾಯಿತಿ ಹಂತದಲ್ಲಿ ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ತಗಲುವ ಇತರೆ ವೆಚ್ಚಗಳನ್ನು ಹದಿನೈದನೇ ಹಣಕಾಸು ಆಯೋಗದ **"Any other location specific felt needs" Expenditure Component** ಯಡಿ ವೆಚ್ಚ ಭರಿಸಲು ಅಥವಾ ಸ್ವಂತ ಸಂಪನ್ಮೂಲದಿಂದ ಭರಿಸಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಲ್.ಕೆ.ಅತೀಕ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
ಬೆಂಗಳೂರು.

**ರವರಿಗೆ,**

1. ಮಾನ್ಯ ಕುಲಪತಿಗಳು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯ, ಗದಗ
2. ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯ, ಗದಗ
3. ಗದಗ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೋಡಲ್ ಅಧಿಕಾರಿಗಳಿಗೆ ಮೇಲ್ವಿಚಾರಣೆ ಮತ್ತು ಸೂಕ್ತ ಕ್ರಮಕ್ಕಾಗಿ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಗದಗ ಜಿಲ್ಲಾ ಪಂಚಾಯತ್
5. ಮುಖ್ಯ ಯೋಜನಾಧಿಕಾರಿಗಳು, ಗದಗ ಜಿಲ್ಲಾ ಪಂಚಾಯತ್
6. ಗದಗ ಜಿಲ್ಲಾ ವ್ಯಾಪ್ತಿಯ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು. (ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
7. ಗದಗ ಜಿಲ್ಲಾ ವ್ಯಾಪ್ತಿಯ ಎಲ್ಲಾ ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು. (ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

**ಪ್ರತಿಯನ್ನು:**

1. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳಿಗೆ ಮಾಹಿತಿಗಾಗಿ.
2. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
4. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,ಬೆಂಗಳೂರು ಇವರ ಆಪ್ತ ಸಹಾಯಕರು.
5. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಬೆಂಗಳೂರು.
6. ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
7. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು.
8. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ / ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
9. ಕಛೇರಿ ಪ್ರತಿ.